ಪ್ರ-330 (65)

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀಮತಿ ಎಸ್.ವೀಣಾ ಅಚ್ಚಯ್ಯರವರಿಂದ ನಿಯಮ–330 ರಡಿಯಲ್ಲಿ ನೀಡಿರುವ ಸೂಚನಾ ಪತ್ರಕ್ಕೆ ಉತ್ತರವನ್ನು ಸಲ್ಲಿಸುವ ಬಗ್ಗೆ.**

**ವಿಷಯ:**

ಕೊಡಗು ಜಿಲ್ಲೆಯಲ್ಲಿ ಹಲವಾರು ಮಾಜಿ ಸೈನಿಕರು ಹಾಗೂ ಅವರ ಅವಲಂಬಿತರು ನಿವೇಶನ ಮಂಜೂರಾತಿಗಾಗಿ ಕೋರಿ ಸಲ್ಲಿಸಿರುವ ಬೇಡಿಕೆಗಳು ದೀರ್ಘ ಕಾಲದಿಂದ ಬಾಕಿ ಇದ್ದು, ಮಾಜಿ ಸೈನಿಕರಿಗೆ ಇದುವರೆಗೂ ನಿವೇಶನ ದೊರಕದೆ ಇರುವ ಗಂಭೀರ ಸಮಸ್ಯೆ ಕುರಿತು.

**ಉತ್ತರ:**

ಕೊಡಗು ಜಿಲ್ಲೆಯ ವ್ಯಾಪ್ತಿಯಲ್ಲಿ ನಾಲ್ಕು ನಗರ ಸ್ಥಳೀಯ ಸಂಸ್ಥೆಗಳು ಇದ್ದು, ಮಾಜಿ ಸೈನಿಕರು ಮತ್ತು ಅವರ ಅವಲಂಬಿತರು ನಿವೇಶನ ಮಂಜೂರಾತಿಗೆ ಸಂಬಂಧಿಸಿದಂತೆ, ಮಡಿಕೇರಿ ನಗರಸಭೆ, ವಿರಾಜಪೇಟೆ ಮತ್ತು ಕುಶಾಲನಗರ ಪಟ್ಟಣ ಪಂಚಾಯತಿಯಲ್ಲಿ ಅರ್ಜಿಗಳು ಸ್ವೀಕೃತವಾಗಿರುವುದಿಲ್ಲ. ಆದರೆ, ಸೋಮವಾರಪೇಟೆ ಪಟ್ಟಣ ಪಂಚಾಯ್ತಿಯಲ್ಲಿ ಮಾತ್ರ ಒಂದು ಅರ್ಜಿ ಸ್ವೀಕೃತವಾಗಿದ್ದು, ಸದರಿ ಅರ್ಜಿಯ ಬಗ್ಗೆ, ಕ್ರಮ ವಹಿಸುವ ಸಂಬಂಧ ಸೋಮವಾರಪೇಟೆ ಪಟ್ಟಣ ಪಂಚಾಯಿತಿಗೆ ಸಂಬಂಧಿಸಿದಂತೆ, ಪಂಚಾಯಿತಿಯ ಸುತ್ತಮುತ್ತ ಸರ್ಕಾರಿ ರೆವೆನ್ಯೂ ಜಾಗವನ್ನು ಗುರುತಿಸಿಕೊಡುವಂತೆ ತಹಶೀಲ್ದಾರ್, ಸೋಮವಾರಪೇಟೆ ತಾಲೂಕು ರವರನ್ನು ಕೋರಲಾಗಿದ್ದು, ಸೋಮವಾರಪೇಟೆ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಸರ್ಕಾರಿ ಜಮೀನು ಲಭ್ಯವಿಲ್ಲವೆಂದು ತಹಶೀಲ್ದಾರ್, ಸೋಮವಾರಪೇಟೆ ತಾಲೂಕು ರವರು ವರದಿ ಮಾಡಿರುವುದರಿಂದ ನಿವೇಶನ ಹಂಚಿಕೆ ಮಾಡಲು ಸಾಧ್ಯವಾಗಿರುವುದಿಲ್ಲ.

ಸಂಖ್ಯೆ: ನಅಇ 25 ಜಿಇಎಲ್ 2021

(ಎನ್.ನಾಗರಾಜ್ ಎಂಟಿಬಿ)
ಪೌರಾಡಳಿತ ಮತ್ತು ಸಕ್ಕರೆ ಸಚಿವರು